# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಮಹಾದೇವಿ ರಾಮಚಂದ್ರ ಬಜಂತ್ರಿ, ಸದಸ್ಯರು, ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಇವರ ಪತ್ರದ ಸಂಖ್ಯೆ: ಜಿಪಂಆ/ಗ್ರಾಪಂ/ಸಿಬ್ಬಂದಿ/ಸಿಆರ್-324/2016-17 ದಿನಾಂಕ: 09-11-2017.
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್ ದಿನಾಂಕ: 13.12.2017.
3) ಶ್ರೀಮತಿ ಮಹಾದೇವಿ ರಾಮಚಂದ್ರ ಬಜಂತ್ರಿ, ಸದಸ್ಯರು, ಬಳ್ಳೊಳ್ಳಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ರವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆಯ ದಿನಾಂಕ: 02.01.2018.
4) ಇದೇ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರದ ದಿನಾಂಕ: 07.02.2018.

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಶ್ರೀಮತಿ ಮಹಾದೇವಿ ರಾಮಚಂದ್ರ ಬಜಂತ್ರಿ, ಸದಸ್ಯರು, ಬಳ್ಳೊಳ್ಳಿ ಗ್ರಾಮ ಪಂಚಾಯಿತಿ ಇವರು ತಮ್ಮ ಹಿಂದಿನ ಅಧಿಕಾರಾವಧಿ ಮತ್ತು ಪ್ರಸ್ತುತ ಅವಧಿಯಲ್ಲಿ ತಮ್ಮ ಅತ್ತೆ ಮತ್ತು ನಾದಿನಿಯವರ ಹೆಸರಿನಲ್ಲಿ ವಸತಿ ಯೋಜನೆಯಡಿ ಮನೆಗಳನ್ನು ಮಂಜೂರಿಸಿಕೊಂಡು ಮನೆಗಳನ್ನು ನಿರ್ಮಿಸದೆ ಸಹಾಯಧನ ಪಡೆದು ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವುದು ಕಂಡು ಬಂದಿದ್ದು, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ವಿಜಯಪುರ ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಸದರಿ ಗ್ರಾಮ ಪಂಚಾಯಿತಿ ಸದಸ್ಯರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಶ್ರೀಮತಿ ಮಹಾದೇವಿ ರಾಮಚಂದ್ರ ಬಜಂತ್ರಿ, ಸದಸ್ಯರು, ಬಳ್ಳೊಳ್ಳಿ ಗ್ರಾಮ ಪಂಚಾಯಿತಿ ರವರು ಸರ್ಕಾರದಿಂದ ಜಾರಿಗೊಳಿಸಲಾಗಿದ್ದ ಕಾರಣ ಕೇಳಿ ನೋಟೀಸಿಗೆ ಕೆಳಗಿನಂತೆ ಉತ್ತರವನ್ನು ಸಲ್ಲಿಸಿರುತ್ತಾರೆ.

1. ನನ್ನ ಅತ್ತೆಯವರಾದ ಶ್ರೀಮತಿ ರತ್ನಾಬಾಯಿ ಬಜಂತ್ರಿ ಮತ್ತು ನಾದಿನಿ ಸರೂಬಾಯಿ ಬಜಂತ್ರಿ, ಮಂಗಲಾ ಬಜಂತ್ರಿ ಇವರುಗಳು ವಾರ್ಡ್‌ಸಭೆ ಮತ್ತು ಗ್ರಾಮಸಭೆ ಮುಖಾಂತರ ಆಯ್ಕೆಯಾಗಿ ವಸತಿ ಯೋಜನೆಯಲ್ಲಿ ಪ್ರಯೋಜನ ಪಡೆದಿರುತ್ತಾರೆ. ಇವರ ಆಯ್ಕೆಯಲ್ಲಿ ನನ್ನ ಯಾವುದೇ ರೀತಿಯಾದ ಪ್ರಭಾವ ಹಸ್ತಕ್ಷೇಪ ಇರುವುದಿಲ್ಲ.
2. ನನ್ನ ಅತ್ತೆ, ನಾದಿನಿಯವರು ಪ್ರಸ್ತುತ ಅವಧಿಯ ವಸತಿ ಯೋಜನೆಯ ಫಲಾನುಭವಿ ಪಟ್ಟಿಯಲ್ಲಿ ಇರುವುದಿಲ್ಲ.
3. ತನಿಖಾಧಿಕಾರಿಗಳು ಈ ವಿಷಯವಾಗಿ ನನ್ನನ್ನು ಸಂಪರ್ಕ ಮಾಡಿ ವಿಚಾರಣೆ ಮಾಡದೆ, ಯಾವುದೇ ಹೇಳಿಕೆ ಪಡೆಯದೆ ವರದಿ ನೀಡಿರುವುದು ಸಮಂಜಸವಲ್ಲ. ಆದ್ದರಿಂದ ಸದರಿ ಆಪಾದನೆಗಳನ್ನು ಅಲ್ಲಗಳೆಯುತ್ತಾ ಪ್ರಕರಣದಿಂದ ತಮ್ಮನ್ನು ಕೈಬಿಡಬೇಕಾಗಿ ಕೋರಿರುತ್ತಾರೆ.

ಮೇಲೆ ಓದಲಾದ (4) ರನ್ವಯ ದಿನಾಂಕ: 17.02.2018 ರಂದು ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ನ್ಯಾಯಾಲಯದಲ್ಲಿ ಮೌಖಿಕ ವಿಚಾರಣೆ ಜರುಗಿಸಲಾಗಿ, ವಿಚಾರಣಾ ಸಂದರ್ಭದಲ್ಲಿ ಪ್ರಸ್ತುತ ಅವಧಿಯಲ್ಲಿ ಸದಸ್ಯರ ಹೆಸರಿನಲ್ಲಿ ಯಾವುದೇ ವಸತಿ ಮಂಜೂರಾಗಿರುವುದಿಲ್ಲವೆಂದು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕಾಧಿಕಾರಿ ಮತ್ತು ಜಿಲ್ಲಾ ಪಂಚಾಯ್ತಿಯ ಅಧೀಕ್ಷಕರು ಹೇಳಿಕೆ ನೀಡಿರುತ್ತಾರೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಆಪಾದಿತರ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿ, ಶ್ರೀಮತಿ ಮಹಾದೇವಿ ರಾಮಚಂದ್ರ ಬಜಂತ್ರಿ, ಸದಸ್ಯರು, ಬಳ್ಳೊಳ್ಳಿ ಗ್ರಾಮ ಪಂಚಾಯಿತಿ ರವರ ವಿರುದ್ಧದ ಆಪಾದನೆಯು ಹಿಂದಿನ ಸದಸ್ಯತ್ವದ ಅವಧಿಗೆ ಸಂಬಂಧಿಸಿದ್ದಾಗಿದ್ದು, ಮಾನ್ಯ ಉಚ್ಛ ನ್ಯಾಯಾಲಯದ ಪ್ರಕರಣ ಸಂಖ್ಯೆ: 16856/2000 ರಲ್ಲಿನ ಆದೇಶದಂತೆ 43(ಎ) ಪ್ರಕರಣವು ಪ್ರಸ್ತುತ ಅಧಿಕಾರ ಅವಧಿಯಲ್ಲಿ ದುರ್ನಡತೆ ಎಸಗಿರುವ ಪ್ರಕರಣಗಳಿಗೆ ಅನ್ವಯಿಸುವುದರಿಂದ ಸದರಿ ಗ್ರಾಮ ಪಂಚಾಯ್ತಿ ಸದಸ್ಯರಿಗೆ ಇನ್ನು ಮುಂದೆ ಈ ರೀತಿ ಆಗದಂತೆ ಎಚ್ಚರಿಕೆ ನೀಡಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ಪ್ರಾರಂಭಿಸಿರುವ ವಿಚಾರಣೆಯನ್ನು ಕೈಬಿಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 986 ಗ್ರಾಪಂಅ 2017, ಬೆಂಗಳೂರು, ದಿನಾಂಕ: 05-04-2018**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಮಹಾದೇವಿ ರಾಮಚಂದ್ರ ಬಜಂತ್ರಿ, ಸದಸ್ಯರು, ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ರವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ಪ್ರಾರಂಭಿಸಿರುವ ವಿಚಾರಣೆಯನ್ನು ಕೈಬಿಟ್ಟು, ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯಿತಿ, ವಿಜಯಪುರ.
2) ಕಾರ್ಯನಿರ್ವಾಹಕಾಧಿಕಾರಿ, ಇಂಡಿ ತಾಲ್ಲೂಕು ಪಂಚಾಯಿತಿ, ಇಂಡಿ, ವಿಜಯಪುರ ಜಿಲ್ಲೆ.
3) ಶ್ರೀಮತಿ ಮಹಾದೇವಿ ರಾಮಚಂದ್ರ ಬಜಂತ್ರಿ, ಸದಸ್ಯರು, ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
4) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
5) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.